ಒಬ್ಬ ಮಾನ್ಯ ಸದಸ್ಯರು : ಕುಂಬಳಕಾಯಿ ಕಳ್ಳ ಎಂದರೆ ಇವರು ಏತಕ್ಕಾಗಿ ಹೆಗಲು ಮುಟ್ಟಿ ನೋಡಿಕೊಳ್ಳುತ್ತಾರೆ ?

(ಗೊಂದಲ)

ಸಭೆಯ ಮುಂದಿಡಲಾದ ಕಾಗದ ಪತ್ರಗಳು

(ಮೊದಲನೇ ಮತ್ತು ಎರಡನೇ ಪಟ್ಟಿ)

(ಮೊದಲನೇ ಪಟ್ಟಿ)

I ಶ್ರೀ ಸಿದ್ದರಾಮಯ್ಯ, ಮಾನ್ಯ ಮುಖ್ಯಮಂತ್ರಿಗಳು:– ಮಾನ್ಯ ಅಧ್ಯಕ್ಷರೆ,**2003 ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ ಅಧಿನಿಯಮ ಪ್ರಕರಣ 5(1) ರ ಮೇರೆಗೆ**

1. 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ (1)(ii) ರ ಬಾಬಿನಲ್ಲಿ ಕೆಲವೊಂದು ತಿದ್ದುಪಡಿಗೊಳಿಸಿ ಹಾಗೂ (ii)ನೇ ಬಾಬಿನ ನಂತರ(iii)ನ್ನು ಸೇರ್ಪಡೆಗೊಳಿಸಿ ದಿನಾಂಕ: 21–04–2014 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಎಫ್‌ಡಿ/41/ಸಿಎಸ್‌ಎಲ್‌/2014

1978ರ ಕರ್ನಾಟಕ ರಾಜ್ಯ ನಾಗರೀಕ ಸೇವಾ ಅಧಿನಿಯಮದ ಪ್ರಕರಣ 8(3)ರ ಮೇರೆಗೆ

2. 1978ರ ಕರ್ನಾಟಕ ರಾಜ್ಯ ನಾಗರೀಕ ಸೇವಾ ಅಧಿನಿಯಮದ ನಿಯಮ 550ಕ್ಕೆ ತಿದ್ದುಪಡಿಗೊಳಿಸಿ ದಿನಾಂಕ: 01–04–2014 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಆಇ/02/ಸನಿತಿ/2013

3. 1978ರ ಕರ್ನಾಟಕ ರಾಜ್ಯ ನಾಗರೀಕ ಸೇವಾ ಅಧಿನಿಯಮದ ನಿಯಮ 224ಬಿ ಗೆ ತಿದ್ದುಪಡಿ ಮಾಡಿ ದಿನಾಂಕ: 29–03–2014 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಆಇ/01/ಸನಿತಿ/2014

4. 1978ರ ಕರ್ನಾಟಕ ರಾಜ್ಯ ನಾಗರೀಕ ಸೇವಾ ಅಧಿನಿಯಮದ ನಿಯಮಗಳಿಗೆ ತಿದ್ದುಪಡಿಗೊಳಿಸಿ ದಿನಾಂಕ: 29–01–2014 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಎಫ್‌ಡಿ/05 ಎಸ್‌ಆರ್‌ಎ/2012.

2012ರ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮದ ನಿಯಮ 11(2) ರ ಮೇರೆಗೆ

5. 2012ರ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮಕ್ಕೆ ನಿಯಮಗಳನ್ನು ರಚಿಸಿ ದಿನಾಂಕ: 22–02–2014 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಸಿಆಸುಇ/44/ಸೇಸ್ಥಅ/2013.

2011ರ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮದ ನಿಯಮ 19(2) ಮೇರೆಗೆ

6. ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011 ರಡಿಯಲ್ಲಿ ಹೆಚ್ಚುವರಿ 32 ಸೇವೆಗಳನ್ನು ಸೇರ್ಪಡೆಗೊಳಿಸಿ ದಿನಾಂಕ: 06–02–14 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಸಿಆಸುಇ/169/ನಾಸೇಖಾ/2013

7. ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011 ರಡಿಯಲ್ಲಿ ಹೆಚ್ಚುವರಿ 28 ಸೇವೆಗಳನ್ನು ಸೇರ್ಪಡೆಗೊಳಿಸಿ ದಿನಾಂಕ: 29–11–13 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಸಿಆಸುಇ/169/ನಾಸೇಖಾ/2013

II ಶ್ರೀ ಸತೀಶ್ ಲಕ್ಷ್ಮಣರಾವ್ ಜಾರ್ಕಿಹೋಳಿ, ಮಾನ್ಯ ಅಬಕಾರಿ ಸಚಿವರು:–

ಮಾನ್ಯ ಅಧ್ಯಕ್ಷರೆ,

1965ರ ಕರ್ನಾಟಕ ಅಬಕಾರಿ ಅಧಿನಿಯಮದ ಪ್ರಕರಣ 71 ರ ಮೇರೆಗೆ.

1. 1968ರ ಕರ್ನಾಟಕ ಅಬಕಾರಿ (ಅಬಕಾರಿ ಸುಂಕಗಳು ಮತ್ತು ಫೀಜುಗಳು) ನಿಯಮದಡಿಯಲ್ಲಿನ ಡಿ–ಅನುಸೂಚಿಗೆ ತಿದ್ದುಪಡಿಮಾಡಿ ದಿನಾಂಕ: 28–02–2014ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಎಫ್‌ಡಿ 03 ಪಿಇಎಸ್/2014(I)

2. 1967ರ ಕರ್ನಾಟಕ ಅಬಕಾರಿ (ಡಿಸ್ಟಿಲರಿ ಮತ್ತು ಉಗ್ರಾಣ) ನಿಯಮಗಳ ನಿಯಮ 7ಕ್ಕೆ ತಿದ್ದುಪಡಿಮಾಡಿ ದಿನಾಂಕ: 28–02–2014 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಎಫ್‌ಡಿ/03/ಪಿಇಎಸ್/2014(II)

3. 1967ರ ಕರ್ನಾಟಕ ಅಬಕಾರಿ (ಬ್ರೂವರಿ) ನಿಯಮಗಳ ನಿಯಮ 5ಕ್ಕೆ ತಿದ್ದುಪಡಿ ಮಾಡಿ ದಿನಾಂಕ: 28–02–2014 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಎಫ್‌ಡಿ/03/ಪಿಇಎಸ್/2014(III)

4. 1968ರ ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮಧ್ಯಮ ಮಾರಾಟ) ನಿಯಮಗಳ ನಿಯಮ 8ಕ್ಕೆ ತಿದ್ದುಪಡಿಮಾಡಿ ದಿನಾಂಕ: 28–02–2014 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಎಫ್‌ಡಿ/03/ಪಿಇಎಸ್/2014(IV)

5. 1967ರ ಕರ್ನಾಟಕ ಅಬಕಾರಿ ಸನ್ನದುಗಳ (ಸಾಮಾನ್ಯ ಷರತ್ತುಗಳು) ನಿಯಮಗಳ ನಿಯಮ 23ಕ್ಕೆ ತಿದ್ದುಪಡಿಮಾಡಿ ದಿನಾಂಕ: 28–02–2014 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಎಫ್‌ಡಿ/03/ಪಿಇಎಸ್/2014(V)

III **ಶ್ರೀ ಕೆ.ಜೆ. ಜಾರ್ಜ್, ಮಾನ್ಯ ಗೃಹ ಸಚಿವರು:–** ಮಾನ್ಯ ಅಧ್ಯಕ್ಷರೆ,

1978ರ ಕರ್ನಾಟಕ ರಾಜ್ಯ ನಾಗರೀಕ ಸೇವಾ ಅಧಿನಿಯಮ ಪ್ರಕರಣ 8(3)ರ ಮೇರೆಗೆ.

1. 2004ರ ಕರ್ನಾಟಕ ರಾಜ್ಯ ಪೊಲೀಸ್ ಲಿಪಿಕ ಸೇವೆಗಳನ್ನು ಒಳಗೊಂಡ (ನೇಮಕಾತಿ) ನಿಯಮಗಳಿಗೆ ತಿದ್ದುಪಡಿಗೊಳಿಸಿ ದಿನಾಂಕ: 22–02–2014 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಒಇ/77/ಪೊಸಿಅ/2013(**I**)

2. 2009ರ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳಿಗೆ ತಿದ್ದುಪಡಿಗೊಳಿಸಿ ದಿನಾಂಕ: 22–02–2014 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಒಇ/77/ಪೊಸಿಅ/2013(**II**)

3. 2011ರ ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ದಳ (ವೃಂದ ಮತ್ತು ನೇಮಕಾತಿ) ನಿಯಮಗಳಿಗೆ ತಿದ್ದುಪಡಿಗೊಳಿಸಿ ದಿನಾಂಕ: 22–02–2014 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಒಇ/77/ಪೊಸಿಅ/2013(**III**)

4. 1994ರ ಕರ್ನಾಟಕ ಮೀಸಲು ಪೊಲೀಸ್ ಸೇವೆಗಳು (ಪತ್ತೇದಾರಿ ದಳ) (ನೇಮಕಾತಿ) ನಿಯಮಗಳಿಗೆ ತಿದ್ದುಪಡಿಗೊಳಿಸಿ ದಿನಾಂಕ: 23–01–2014 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಒಇ/320/ಪೊಸಿಅ/2008

ಶ್ರೀ ಟಿ.ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

IV **ಶ್ರೀ ಡಿ.ಕೆ. ಶಿವಕುಮಾರ್, ಮಾನ್ಯ ಇಂಧನ ಸಚಿವರ ಪರವಾಗಿ:–** ಮಾನ್ಯ ಅಧ್ಯಕ್ಷರೆ,

2003ರ ಕರ್ನಾಟಕ ವಿದ್ಯುಚ್ಛಕ್ತಿ ಅಧಿನಿಯಮ 182 ರನ್ವಯ

ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ (ಮುಕ್ತ ಅವಕಾಶಕ್ಕಾಗಿ ನಿಬಂಧನೆ ಮತ್ತು ಷರತ್ತುಗಳು) ವಿನಿಯಮ 2004ಕ್ಕೆ ತಿದ್ದುಪಡಿಯನ್ನು ಹಾಗೂ ನಿಯಮ4 (ಎ)ನ್ನು ಸೇರ್ಪಡೆಗೊಳಿಸಿ ದಿನಾಂಕ: 17–02–2014 ರಂದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ: ವೈ/03/4.

V ಶ್ರೀ ಹೆಚ್.ಕೆ. ಪಾಟೀಲ್, ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು:– ಮಾನ್ಯ ಅಧ್ಯಕ್ಷರೆ,

1978ರ ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ 8(3)ರ ಮೇರೆಗೆ

1. 2008ರ ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಸರ್ಕಾರ ಶಾಖೆ) (ವೃಂದ ಮತ್ತು ನೇಮಕಾತಿ) ನಿಯಮಗಳಿಗೆ ತಿದ್ದುಪಡಿಗೊಳಿಸಿ ದಿನಾಂಕ: 31–03–2012 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಗ್ರಾಅಪ/181/ಗ್ರಾಪಂಕಾ/2011.

1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 316 ರ ಮೇರೆಗೆ

2. 2012 ರ ಕರ್ನಾಟಕ ಪಂಚಾಯತ್ ರಾಜ್ (ಜಾಹಿರಾತು ಮತ್ತು ಫಲಕಗಳ ಅಳವಡಿಕೆಯ ಮೇಲೆ ಗ್ರಾಮ ಪಂಚಾಯತಿಗಳ ನಿಯಂತ್ರಣ) (ಮಾದರಿ ಉಪವಿಧಿಗಳು) ಅಧಿನಿಯಮಕ್ಕೆ ಮಾದರಿ ಉಪವಿಧಿಗಳನ್ನು ದಿನಾಂಕ: 16–02–2013ರಂದು ರಚಿಸಿ ಹೊರಡಿಸಿರುವ ಅಧಿಸೂಚನೆ ಸಂಖ್ಯೆ: ಗ್ರಾಅಪ 561 ಗ್ರಾಪಂಅ 2012.

1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 243(1) ಹಾಗೂ 244ರ ಮೇರೆಗೆ

3. 2006ರ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು ನಿಯಮಗಳಿಗೆ ತಿದ್ದುಪಡಿಗೊಳಿಸಿ ದಿನಾಂಕ : 14–06–2013 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಗ್ರಾಅಪ/83/ಗ್ರಾಪಂಅ 2013.

1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 296(ಎ) ಮೇರೆಗೆ

4. ಪಂಚಾಯತ್ ರಾಜ್ ಅಧಿನಿಯಮದಡಿ ಸ್ವೀಕರಿಸಲಾಗುವ ದೂರುಗಳನ್ನು ಪರಿಹರಿಸಿ ಶೀಘ್ರವಾಗಿ ವಿಲೇಗೊಳಿಸಲು ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿಗಳಿಗೆ ಪಂಚಾಯಿತಿ ಓಂಬುಡ್ಸ್‌ಮನ್‌ಗಳಾಗಿ ನೇಮಕಗೊಳಿಸಿ ದಿನಾಂಕ: 03–03–2014 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಗ್ರಾಅಪ/36/ಜಿಪಸ/2014.

1978ರ ಕರ್ನಾಟಕ ಸಿವಿಲ್ ಸೇವಾ ಅಧಿನಿಯಮ 8(3)ರ ಮೇರೆಗೆ

5. 2008ರ ಕರ್ನಾಟಕ ಪಂಚಾಯತ್ ರಾಜ್ ಇಂಜಿನಿಯರಿಂಗ್ ಸೇವೆಗಳು (ವೃಂದ ಮತ್ತು ನೇಮಕಾತಿ) ನಿಯಮಗಳನ್ನು ರಚಿಸಿ ದಿನಾಂಕ: 24–05–2008 ರಂದು ಹೊರಡಿಲಾಗಿರುವ ಅಧಿಸೂಚನೆ ಸಂಖ್ಯೆ: ಗ್ರಾಅಪ/139/ಸೇಶಿಕಾ/91

6. 2008 ಕರ್ನಾಟಕ ಪಂಚಾಯತ್ ರಾಜ್ ಇಂಜಿನಿಯರಿಂಗ್ ಸೇವೆಗಳು (ವೃಂದ ಮತ್ತು ನೇಮಕಾತಿ)(ತಿದ್ದುಪಡಿ) ನಿಯಮಗಳನ್ನು ರಚಿಸಿ ದಿನಾಂಕ:12–11–2013 ರಂದು ಹೊರಡಿಸಿರುವ ಅಧಿಸೂಚನೆ ಸಂಖ್ಯೆ: ಗ್ರಾಅಪ/106/ಜಿಪಅ/2013.

ಅಧ್ಯಕ್ಷರು : ಮಂಡಿಸಲಾಯಿತು.

(ಎರಡನೇ ಪಟ್ಟಿ)

I ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿ) ಅವರು:–

1956ರ ಕಂಪನಿ ಅಧಿನಿಯಮ 619(ಎ)(2)ರ ಪ್ರಕರಣದ ಮೇರೆಗೆ:

1. ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತದ 2012–13ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

I I **ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು) ಮಾನ್ಯ ಅಧ್ಯಕ್ಷರೆ,**

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ ಪ್ರಕರಣ 50(2) ಮತ್ತು 47(4)ರ ಮೇರೆಗೆ:

1. ಗುಲ್ಬರ್ಗಾ ವಿಶ್ವವಿದ್ಯಾಲಯದ 2012–13ನೇ ಸಾಲಿನ ವಾರ್ಷಿಕ ವರದಿ.

2. ಕನ್ನಡ ವಿಶ್ವವಿದ್ಯಾಲಯ, ಹಂಪಿ ಇದರ 2012–13ನೇ ಸಾಲಿನ ವಾರ್ಷಿಕ ವರದಿ.

3. ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ ಇದರ 2010–11ನೇ ಸಾಲಿನ ಲೆಕ್ಕಪರಿಶೋಧನಾ ವರದಿಗೆ ಅನುಪಾಲನಾ ವರದಿ ಹಾಗೂ 2012–13ನೇ ಸಾಲಿನ ವಾರ್ಷಿಕ ವರದಿ.

4. ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಇದರ 2012–13ನೇ ಸಾಲಿನ ವಾರ್ಷಿಕ ಲೆಕ್ಕಪತ್ರ ವರದಿ.

1956ರ ಕಂಪನಿಗಳ ಅಧಿನಿಯಮ 619ಎ(2)ರ ಮೇರೆಗೆ:

1. ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತದ 2011–12 ಹಾಗೂ 2012–13ನೇ ಸಾಲಿನ ವಾರ್ಷಿಕ ವರದಿ (ಲೆಕ್ಕಪರಿಶೋಧನಾ ವರದಿ ಒಳಗೊಂಡಂತೆ)ಗಳನ್ನು ಮಂಡಿಸುವುದು.

III. ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪಶು ಸಂಗೋಪನೆ ಸಚಿವರು) ಮಾನ್ಯ ಅಧ್ಯಕ್ಷರೆ,

ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕಾಯ್ದೆ 2004ರ ಸೆಕ್ಷನ್ 43(3)ರ ಮೇರೆಗೆ

1. ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್‌ನ 2012–13ನೇ ಸಾಲಿನ ವಾರ್ಷಿಕ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

IV. ಶ್ರೀ ಡಿ.ಕೆ. ಶಿವಕುಮಾರ್ (ಇಂಧನ ಸಚಿವರು) ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಪರವಾಗಿ:–

ಮಾನ್ಯ ಅಧ್ಯಕ್ಷರೆ,

ಕಂಪನಿಗಳ ಅಧಿನಿಯಮ 1956ರ ಕಲಂ 619(ಎ)ರ ಮೇರೆಗೆ

1. ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತದ 2012–13ನೇ ಸಾಲಿನ ವಾರ್ಷಿಕ ವರದಿ (ಲೆಕ್ಕಪರಿಶೋಧನಾ ವರದಿ ಒಳಗೊಂಡಂತೆ).

2. ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯ 2012–13ನೇ ಸಾಲಿನ ವಾರ್ಷಿಕ ವರದಿ (ಲೆಕ್ಕಪರಿಶೋಧನಾ ವರದಿ ಒಳಗೊಂಡಂತೆ).

3. ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ 2012–13ನೇ ಸಾಲಿನ ವಾರ್ಷಿಕ ವರದಿ (ಲೆಕ್ಕಪರಿಶೋಧನಾ ವರದಿ ಒಳಗೊಂಡಂತೆ).

4. ಗುಲ್ಬರ್ಗಾ ವಿದ್ಯುತ್‌ಚ್ಛಕ್ತಿ ಸರಬರಾಜು ಕಂಪನಿ ನಿಯಮಿತದ 2012–13ನೇ ಸಾಲಿನ ವಾರ್ಷಿಕ ವರದಿ (ಲೆಕ್ಕಪರಿಶೋಧನಾ ವರದಿ ಒಳಗೊಂಡಂತೆ).

ವಿದ್ಯುಚ್ಛಕ್ತಿ ಕಾಯ್ದೆ 2003ರ ಸೆಕ್ಷನ್ 104ರ ಮೇರೆಗೆ

1. ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ 2012–13ನೇ ಸಾಲಿನ ವಾರ್ಷಿಕ ಲೆಕ್ಕಪತ್ರ ವರದಿಗಳನ್ನು ಮಂಡಿಸುತ್ತೇನೆ.

V. ಶ್ರೀ ಹೆಚ್.ಕೆ. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಮಾನ್ಯ ಅಧ್ಯಕ್ಷರೆ:–

1. ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತಿಯ 2011–12ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

2. ಚಿತ್ರದುರ್ಗ ಜಿಲ್ಲಾ ಪಂಚಾಯತಿಯ 2011–12ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ವರದಿ.

3. ಬೀದರ್ ಜಿಲ್ಲಾ ಪಂಚಾಯತಿಯ 2011–12ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ವರದಿ.

4. ಕೊಪ್ಪಳ ಜಿಲ್ಲಾ ಪಂಚಾಯತಿಯ 2011–12ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ವರದಿ.

5. ಚಾಮರಾಜನಗರ ಜಿಲ್ಲಾ ಪಂಚಾಯತಿಯ 2011–12ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನಾ ವರದಿ.

6. ಕೊಡಗು ಜಿಲ್ಲಾ ಪಂಚಾಯತಿ, ಮಡಿಕೇರಿಯ 2012–13ನೇ ಸಾಲಿನ ವಾರ್ಷಿಕ ಲೆಕ್ಕತಃಖ್ತೆಗಳ ವರದಿ.

7. ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತಿಯ 2012–13ನೇ ಸಾಲಿನ ವಾರ್ಷಿಕ ಲೆಕ್ಕಪರಿಶೋಧನಾ ವರದಿ.

8. ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತಿಯ 2011–12ನೇ ಸಾಲಿನ ವಾರ್ಷಿಕ ಲೆಕ್ಕಪತ್ರ ವರದಿ.

9. ಗದಗ ಜಿಲ್ಲಾ ಪಂಚಾಯತಿಯ 2012–13ನೇ ಸಾಲಿನ ವಾರ್ಷಿಕ ಲೆಕ್ಕಪರಿಶೋಧನ ವರದಿ.

ಕಂಪನಿಗಳ ಅಧಿನಿಯಮ 1956ರ ಕಾಯ್ದೆ 619(ಎ)ರ ಮೇರೆಗೆ

1. ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್‌ನ 2012–13ನೇ ಸಾಲಿನ ವಾರ್ಷಿಕ ವರದಿ (ಲೆಕ್ಕಪರಿಶೋಧನಾ ವರದಿ ಒಳಗೊಂಡಂತೆ)ಗಳನ್ನು ಮಂಡಿಸುತ್ತೇನೆ.

VI. ಶ್ರೀ ಟಿ.ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) ಶ್ರೀ ರಾಮಲಿಂಗರೆಡ್ಡಿ (ಸಾರಿಗೆ ಸಚಿವರ) ಪರವಾಗಿ:–

ಮಾನ್ಯ ಅಧ್ಯಕ್ಷರೆ,

ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗಳ ಕಾಯ್ದೆ 1950ರ ಅಧಿನಿಯಮ 35(2)ರ ಪ್ರಕರಣದ ಮೇರೆಗೆ:

1. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ 2012–13ನೇ ಸಾಲಿನ ವಾರ್ಷಿಕ ಆಡಳಿತ ವರದಿ.

2. ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ 2012–13ನೇ ಸಾಲಿನ ವಾರ್ಷಿಕ ಆಡಳಿತ ವರದಿ.

3. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ 2012–13ನೇ ಸಾಲಿನ ವಾರ್ಷಿಕ ಆಡಳಿತ ವರದಿ.

4. ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಗುಲ್ಬರ್ಗಾದ 2012–13ನೇ ಸಾಲಿನ ವಾರ್ಷಿಕ ಆಡಳಿತ ವರದಿಗಳನ್ನು ಮಂಡಿಸುತ್ತೇನೆ.

VII. ಶ್ರೀ ಟಿ.ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

ಶ್ರೀ ಶಾಮನೂರು ಶಿವಶಂಕರಪ್ಪ (ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಪರವಾಗಿ)

ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಗಳ ಕಾಯ್ದೆ 2009ರ ನಿಯಮ 40(3)ರನ್ವಯ

ಮಾನ್ಯ ಅಧ್ಯಕ್ಷರೆ,

1. ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟೆ ಇದರ 2007–08, 2008–09, 2009–10 ಹಾಗೂ 2010–11ನೇ ಸಾಲಿನ ಲೆಕ್ಕಪರಿಶೋಧನಾ ವರದಿಗೆ ಅನುಸರಣಾ ವರದಿಗಳನ್ನು ಮಂಡಿಸುತ್ತೇನೆ.

VIII ಶ್ರೀ ಕೆ.ಜೆ. ಜಾರ್ಜ್ (ಗೃಹ ಸಚಿವರು) :–

ಕಂಪನಿಗಳ ಅಧಿನಿಯಮ 1956ರ ಕಾಯ್ದೆ 619(ಎ) ಮೇರೆಗೆ

1. ಕರ್ನಾಟಕ ರಾಜ್ಯ ಪೊಲೀಸ್ ಗೃಹ ನಿರ್ಮಾಣ ನಿಗಮ ನಿಯಮಿತದ 2012–13ನೇ ಸಾಲಿನ ವಾರ್ಷಿಕ ವರದಿ (ಲೆಕ್ಕಪರಿಶೋಧನಾ ವರದಿ ಒಳಗೊಂಡಂತೆ)ಯನ್ನು ಮಂಡಿಸುತ್ತೇನೆ.

IX. ಶ್ರೀ ಟಿ.ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

ಶ್ರೀ ಆರ್. ರೋಶನ್ ಬೇಗ್ (ಮೂಲಭೂತಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರ) ಪರವಾಗಿ :–

ಮಾನ್ಯ ಅಧ್ಯಕ್ಷರೆ,

1956ರ ಕಂಪನಿ ಕಾಯ್ದೆಯ 619(ಎ)(3)ರ ಪ್ರಕರಣದ ಮೇರೆಗೆ:

1. **ತದಡಿ ಬಂದರು ನಿಯಮಿತದ 2012–13ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.**

X. ಶ್ರೀ ಹೆಚ್.ಎಸ್. ಮಹದೇವಪ್ರಸಾದ್ (ಸಹಕಾರ ಮತ್ತು ಸಕ್ಕರೆ ಸಚಿವರು)

ಮಾನ್ಯ ಅಧ್ಯಕ್ಷರೆ,

ಕರ್ನಾಟಕ ಉಗ್ರಾಣ ನಿಗಮದ ಕಾಯ್ದೆ 1962ರ ಸೆಕ್ಷನ್ 31(10)ರ ಮೇರೆಗೆ

1. ಕರ್ನಾಟಕ ರಾಜ್ಯ ಉಗ್ರಾಣ ನಿಗಮದ 2012–13ನೇ ಸಾಲಿನ ವಾರ್ಷಿಕ ಹಾಗೂ ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತೇನೆ.

1956ರ ಕಂಪನಿ ಅಧಿನಿಯಮ 619(ಎ)(2)ರ ಪ್ರಕರಣದ ಮೇರೆಗೆ:

1. ದಿ ಮೈಸೂರು ಸಕ್ಕರೆ ಕಂಪನಿ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತೇನೆ.

XI. ಶ್ರೀ ಎಂ.ಹೆಚ್. ಅಂಬರೀಶ್ (ವಸತಿ ಸಚಿವರು)

ಮಾನ್ಯ ಅಧ್ಯಕ್ಷರೆ,

ಕರ್ನಾಟಕ ಗೃಹಮಂಡಳಿ ಅಧಿನಿಯಮದ ಪ್ರಕರಣ 55(2)ರ ಮೇರೆಗೆ:

1. ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ 2012–13ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

XII. ಶ್ರೀ ವಿನಯ್‌ಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು) ಅವರು :–

ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987ರ ಕಲಂ 48(5) ಮತ್ತು 49ರ ಮೇರೆಗೆ:

1. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ 2011–12ನೇ ಸಾಲಿನ ವಾರ್ಷಿಕ ವರದಿ.
2. ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ 2012–13ನೇ ಸಾಲಿನ ಲೆಕ್ಕಪರಿಶೋಧನಾ ವರದಿ.
3. ಶಿವಮೊಗ್ಗ ನಗರಾಭಿವೃದ್ಧಿ ಪ್ರಾಧಿಕಾರದ 2013–14ನೇ ಸಾಲಿನ ವಾರ್ಷಿಕ ವರದಿ.
4. ಮಡಿಕೇರಿ ನಗರಾಭಿವೃದ್ಧಿ ಪ್ರಾಧಿಕಾರದ 2012–13ನೇ ಸಾಲಿನ ಲೆಕ್ಕಪರಿಶೋಧನಾ ವರದಿ.
5. ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ 2012–13ನೇ ಸಾಲಿನ ಲೆಕ್ಕಪರಿಶೋಧನಾ ವರದಿ.
6. ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ 2013–14ನೇ ಸಾಲಿನ ವಾರ್ಷಿಕ ವರದಿ.
7. ಬೀದರ ನಗರಾಭಿವೃದ್ಧಿ ಪ್ರಾಧಿಕಾರದ 2011–12, 2012–13, ಹಾಗೂ 2013–14ನೇ ಸಾಲಿನ ವಾರ್ಷಿಕ ವರದಿಗಳನ್ನು ಮಂಡಿಸುವುದು.

XIII. ಶ್ರೀ ಟಿ.ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) ಶ್ರೀ ಎಂ.ಬಿ. ಪಾಟೀಲ್ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಪರವಾಗಿ):–

ಕಂಪನಿಗಳ ಅಧಿನಿಯಮ 1956ರ ಕಲಂ 619(ಎ)(3)ರ ಮೇರೆಗೆ

ಮಾನ್ಯ ಅಧ್ಯಕ್ಷರೆ,

1. ಕರ್ನಾಟಕ ನೀರಾವರಿ ನಿಗಮ ನಿಯಮಿತದ 2012–13ನೇ ಸಾಲಿನ ವಾರ್ಷಿಕ ವರದಿ (ಲೆಕ್ಕಪರಿಶೋಧನಾ ವರದಿ ಒಳಗೊಂಡಂತೆ)

2. ಕಾವೇರಿ ನೀರಾವರಿ ನಿಗಮ ನಿಯಮಿತದ 2012–13ನೇ ಸಾಲಿನ ವಾರ್ಷಿಕ ವರದಿ (ಲೆಕ್ಕಪರಿಶೋಧನಾ ವರದಿ ಒಳಗೊಂಡಂತೆ)

ಕಾಡಾ ಅಧಿನಿಯಮ 1980ರ ಕಲಂ 24(2)ರನ್ವಯ :

1. ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರ ಕಾವೇರಿ ಜಲಾನಯನ ಯೋಜನೆಗಳು, ಮೈಸೂರು, ಇದರ 2012–13ನೇ ಸಾಲಿನ ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತೇನೆ.

XIV. ಶ್ರೀ ಟಿ.ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಪರವಾಗಿ)

ಮಾನ್ಯ ಅಧ್ಯಕ್ಷರೆ,

1956ರ ಕಂಪನಿ ಕಾಯ್ದೆಯ 619(ಎ)ರ ಮೇರೆಗೆ

1. ಡಾ: ಬಾಬು ಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ 2011–12ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

XV. ಶ್ರೀ ಕೃಷ್ಣಭೈರೇಗೌಡ (ಕೃಷಿ ರಾಜ್ಯ ಸಚಿವರು) :–

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ ಅಧಿನಿಯಮ 2009ರ ಕಲಂ 40(3) ಮತ್ತು 57ರ ಮೇರೆಗೆ:

1. ಕೃಷಿ ವಿಶ್ವವಿದ್ಯಾಲಯ, ರಾಯಚೂರು ಇದರ 2008–09, 2009–10 ಮತ್ತು 2010–11ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

2. ಕೃಷಿ ವಿಶ್ವವಿದ್ಯಾಲಯ, ಧಾರವಾಡ ಇದರ 2012–13ನೇ ಸಾಲಿನ ವಾರ್ಷಿಕ ವರದಿ

ಕಂಪನಿಗಳ ಅಧಿನಿಯಮ 1956ರ ಕಲಂ 619(ಎ)ರ ಮೇರೆಗೆ

1. ಕರ್ನಾಟಕ ಕಾಂಪೋಸ್ಟ್ ಅಭಿವೃದ್ಧಿ ನಿಗಮ ನಿಯಮಿತದ 2012–13ನೇ ಸಾಲಿನ ವಾರ್ಷಿಕ ವರದಿ (ಲೆಕ್ಕಪರಿಶೋಧನಾ ವರದಿ ಒಳಗೊಂಡಂತೆ).

2. ಕರ್ನಾಟಕ ಸ್ಟೇಟ್ ಆಗ್ರೋಕಾರನ್ ಪ್ರಾಡಕ್ಟ್ಸ್ ಲಿಮಿಟೆಡ್‌ನ 2012–13ನೇ ಸಾಲಿನ ವಾರ್ಷಿಕ ವರದಿ (ಲೆಕ್ಕಪರಿಶೋಧನಾ ವರದಿ ಒಳಗೊಂಡಂತೆ) ವರದಿಗಳನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

4. ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು :

1) ವಿಷಯ: ಹೈದರಾಬಾದ್ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ Domicile Certificate ವಿತರಣೆಯಲ್ಲಿ ವಿಳಂಬವಾಗುತ್ತಿರುವ ಬಗ್ಗೆ.

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ವಿರೋಧ ಪಕ್ಷದ ನಾಯಕರು): ಮಾನ್ಯ ಸಭಾಧ್ಯಕ್ಷರೆ, ಇದು ಬಹಳ ಸಣ್ಣ ವಿಚಾರ, ಪ್ರಮಾಣಪತ್ರವನ್ನು ಕೊಡುತ್ತಿಲ್ಲವೆಂಬ ವಿಷಯ ಅಷ್ಟೇ, ನಾನು ಈ ಬಗ್ಗೆ detail ಆಗಿ ಮಾತನಾಡುವುದಿಲ್ಲ, limited ಆಗಿ ಮಾತನಾಡುತ್ತೇನೆ ಅಷ್ಟೆ.

Article 371(J) amendment ಆದಮೇಲೆ ನೀವು ಅರ್ಥ ಮಾಡಿಕೊಳ್ಳಿ, ನಾನು ವಿಷಯವನ್ನು ಪ್ರಸ್ತಾಪ ಮಾಡುತ್ತೇನೆ. ಇದು debatable subject ಅಲ್ಲ. ಸಣ್ಣ ವಿಷಯವಾಗಿದೆ. ಈ Article 371(J) amendment ಆದಮೇಲೆ ಅಲ್ಲಿರತಕ್ಕಂಥ ಯುವಕರಿಗೆ, ವಿದ್ಯಾರ್ಥಿಗಳಿಗೆ ಆ ಒಂದು ಪ್ರಮಾಣಪತ್ರವನ್ನು ತೆಗೆದುಕೊಳ್ಳಬೇಕು. Assistant Commissioner ಆ ಪ್ರಮಾಣಪತ್ರವನ್ನು ಕೊಡಬೇಕು, order issue ಮಾಡಬೇಕು ಒಂದೊಂದು Assistant Commissioner Office ನಲ್ಲಿ ಹತ್ತು ಸಾವಿರ ಅರ್ಜಿಗಳು ಪೆಂಡಿಂಗ್ ಇವೆ. ಆದ್ದರಿಂದ ಆ ಪ್ರಮಾಣಪತ್ರವನ್ನು issue ಮಾಡುವ ಅಧಿಕಾರವನ್ನು ತಹಶೀಲ್ದಾರ್‌ರವರಿಗೆ ಕೊಡಿ. ಉಳಿದೆಲ್ಲ ಪ್ರಮಾಣಪತ್ರಗಳನ್ನು ಕೊಡುವುದಕ್ಕೆ ತಹಶೀಲ್ದಾರ್‌ರವರಿಗೆ ಅಧಿಕಾರ ಕೊಡುತ್ತಿದ್ದೀರಿ. SC/ST Certificate ಕೊಡುವುದಕ್ಕೆ ವರಮಾನ ಪ್ರಮಾಣಪತ್ರವನ್ನು ಕೊಡುವ ಅಧಿಕಾರ ತಹಶೀಲ್ದಾರ್‌ರವರಿಗೆ ಇದೆ. ಈ ಪ್ರಮಾಣಪತ್ರವನ್ನು ಅಸಿಸ್ಟೆಂಟ್ ಕಮೀಷನರ್‌ಗೆ ವಿತರಣೆ ಮಾಡಲಿಕ್ಕೆ ಅಧಿಕಾರ ಕೊಟ್ಟಿರುವುದರಿಂದ ಏನಾಗಿದೆ ಎಂದರೆ ಇವತ್ತು ಹತ್ತು ಸಾವಿರ ಅರ್ಜಿಗಳು ಬಂದಿರುವುದರಿಂದ ಒಂದೊಂದು ತಿಂಗಳು ವಿಳಂಬವಾಗುತ್ತಿದೆ. ಮೆಡಿಕಲ್ ಸೀಟ್ ಪಡೆಯಲಿಕ್ಕೆ, ಬೇರೆ ಬೇರೆ ಸೀಟ್ ಪಡೆಯಲಿಕ್ಕೆ